Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

16.03.2026 14.30 hrs

<><*<><>*><>

ಮುಖ್ಯಾಂಶಗಳು

- **ಹೋಟೆಲ್‌ಗಳಿಗೆ ಸದ್ಯಕ್ಕೆ ಗ್ಯಾಸ್ ಸಿಲಿಂಡರ್ ಪೂರೈಕೆ ಇಲ್ಲ; ಪರ್ಯಾಯ ವ್ಯವಸ್ಥೆ ಮಾಡುವಂತೆ ಸಚಿವ ಕೆ.ಎಚ್.ಮುನಿಯಪ್ಪ ಮನವಿ**
- **ಲಿಖಿತ ಪ್ರಶ್ನೆಗಳಿಗೆ ಉತ್ತರಿಸಲು ಸಚಿವರು ವಿಫಲ; ಕಲಾಪ ನಡೆಸದೆ ಹೊರನಡೆದ ಸಭಾಧ್ಯಕ್ಷ ಯು.ಟಿ.ಖಾದರ್**
- **ರಾಜ್ಯದಲ್ಲಿ ೧೭ ಸಾವಿರದ ೯೭೪ ಎಕರೆ ವಕ್ಫ್ ಆಸ್ತಿ ಒತ್ತುವರಿ- ವಿಧಾನಸಭೆಯಲ್ಲಿ ಸಚಿವ ಜಮೀರ್ ಅಹ್ಮದ್ ಖಾನ್ ಸ್ಪಷ್ಟನೆ**
- **ಮಾರ್ಗಸೂಚಿ ದರಕ್ಕಿಂತ ಮೂರು ಪಟ್ಟು ಹೆಚ್ಚು ಹಣ ನೀಡಿ, ಸ್ಮಶಾನ ಭೂಮಿ ಖರೀದಿಗೆ ಸರ್ಕಾರ ಸಿದ್ಧ- ಸಚಿವ ಕೃಷ್ಣಬೈರೇಗೌಡ**
- **ಚಂದನ ವಾಹಿನಿಯ ರೈತ ರಿಯಾಲಿಟಿ ಶೋ 'ರೈತ ರತ್ನ' ಕಾರ್ಯಕ್ರಮಕ್ಕೆ ಕೃಷಿ ಸಚಿವ ಚಲುವರಾಯಸ್ವಾಮಿ ಚಾಲನೆ**

<><*<><>*><>

ಮಧ್ಯಪ್ರಾಚ್ಯ ಸಂಘರ್ಷದಿಂದ ಈಗಾಗಲೇ ರಾಜ್ಯದಲ್ಲಿನ ಹೋಟೆಲ್ ಉದ್ಯಮಗಳು ಸಂಕಷ್ಟಕ್ಕೆ ಸಿಲುಕಿವೆ. ಈ ನಡುವೆ ಹೋಟೆಲ್‌ಗಳಿಗೆ ಸದ್ಯಕ್ಕೆ ಗ್ಯಾಸ್ ಸಿಲಿಂಡರ್ ಪೂರೈಕೆ ಇಲ್ಲ ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ತೈಲ ಪೂರೈಕೆ ಕಂಪನಿಗಳ ಜೊತೆ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹ ಬಳಕೆಯ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಿಲ್ಲ ಎಂದು ತಿಳಿಸಿದ್ದಾರೆ. ಈಗಾಗಲೇ ಹೋಟೆಲ್ ಮಾಲೀಕರ ಜೊತೆ ಎರಡು ಸುತ್ತಿನ ಸಭೆ ನಡೆಸಲಾಗಿದ್ದು, ಸಿಲಿಂಡರ್‌ಗೆ ಪರ್ಯಾಯವಾಗಿ ವ್ಯವಸ್ಥೆ ಮಾಡಿಕೊಳ್ಳುವಂತೆ ಮನವಿ ಮಾಡಿದ್ದಾರೆ. ಆಹಾರ ಇಲಾಖೆ ಒಟ್ಟು ೨೫೭ ಕಡೆಗಳಲ್ಲಿ ದಾಳಿ ನಡೆಸಿ, ಸಿಲಿಂಡರ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ವಿಧಾನಸಭೆಯಲ್ಲಿ ಇಂದು ಸದಸ್ಯರ ಪ್ರಶ್ನೆಗಳಿಗೆ ಸಚಿವರು ಸರಿಯಾದ ಸಮಯಕ್ಕೆ ಉತ್ತರ ನೀಡದ ಹಿನ್ನಲೆಯಲ್ಲಿ ಅಸಮಾಧಾನಗೊಂಡ ಸಭಾಧ್ಯಕ್ಷ ಯು.ಟಿ.ಖಾದರ್ ಸದನವನ್ನು ಮುಂದೂಡಿದ ಘಟನೆ ನಡೆಯಿತು. ಪ್ರಶ್ನೋತ್ತರ ಕಲಾಪದ ಬಳಿಕ ಲಿಖಿತ ಉತ್ತರವನ್ನು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಂಡಿಸಿದರು. ಆಗ ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ಷೇಪ ವ್ಯಕ್ತಪಡಿಸಿ, ಸದಸ್ಯರ ಎಲ್ಲಾ ಪ್ರಶ್ನೆಗಳಿಗೆ ಉತ್ತರ ನೀಡದೆ ಇರುವುದರಿಂದ ಇದು ಸದಸ್ಯರಿಗೆ ಮಾಡಿದ ಅಗೌರವ ಎಂದು ಅಸಮಾಧಾನ ವ್ಯಕ್ತಪಡಿಸಿದರು. ೨೩೦ ಲಿಖಿತ ಪ್ರಶ್ನೆಗಳ ಪೈಕಿ ೮೪ ಪ್ರಶ್ನೆಗಳಿಗೆ ಮಾತ್ರ ಸಚಿವರಿಂದ ಉತ್ತರ ಬಂದಿದೆ ಎಂದು ಸಚಿವರ ಕಾರ್ಯ ವೈಖರಿಗೆ ಸದನದಲ್ಲೇ ಸಭಾಧ್ಯಕ್ಷರು ಆಕ್ರೋಶ ವ್ಯಕ್ತಪಡಿಸಿದರು. ನಿಯಮಾವಳಿ ಪ್ರಕಾರ, ಸದಸ್ಯರು ಕೇಳಿದ ಪ್ರಶ್ನೆಗಳಿಗೆ ಸರ್ಕಾರ ಉತ್ತರ ಕೊಡಲಿಲ್ಲ ಎಂದರೆ ಹೇಗೆ? ಶಾಸಕರು ಸದನಕ್ಕೆ ಏಕೆ ಬರಬೇಕು ಎಂದು ಪ್ರಶ್ನಿಸಿದರು. ಮೂರು ಬಾರಿ ಹೇಳಿದರೂ ಸಚಿವರಲ್ಲಿ ಸುಧಾರಣೆ ಕಂಡುಬರುತ್ತಿಲ್ಲ. ಸಚಿವರು ಆಗಮಿಸಿ, ಸ್ಪಷ್ಟ ಕಾರಣ ನೀಡಬೇಕು. ಸಚಿವರು ಬಂದು ಸ್ಪಷ್ಟನೆ ನೀಡುವವರಿಗೂ ಸದನ ನಡೆಸುವುದಿಲ್ಲ ಎಂದು ಹೇಳಿ, ಸಭಾಧ್ಯಕ್ಷರು ಹೊರನಡೆದಿದ್ದಾರೆ.

<><*<><>*><>

ರಾಜ್ಯದಲ್ಲಿ ೧೭ ಸಾವಿರದ ೯೬೪ ಎಕರೆ ವಕ್ಫ್ ಆಸ್ತಿ ಒತ್ತುವರಿಯಾಗಿದ್ದು. ಈ ಎಲ್ಲಾ ಭೂಮಿಯನ್ನು ಮುಸ್ಲಿಂ ಸಮುದಾಯದವರೆ ಒತ್ತುವರಿ ಮಾಡಿದ್ದಾರೆ ಎಂದು ವಕ್ಫ್ ಮತ್ತು ಅಲ್ಪಸಂಖ್ಯಾತರ ಖಾತೆ ಸಚಿವ ಬಿ.ಜೆಡ್.ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಎಂ.ವೈ.ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಒತ್ತುವರಿ ಜಮೀನು ತೆರವುಗೊಳಿಸಲು ವಕ್ಫ್ ಅದಾಲತ್ ನಡೆಸಲಾಗಿದೆ. ಭವಿಷ್ಯದಲ್ಲಿ ವಕ್ಫ್ ಜಮೀನು ಒತ್ತುವರಿಯಾಗದಂತೆ ಕ್ರಮಕೈಗೊಳ್ಳಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ. ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಬೆಂಗಳೂರಿನ ವಿಂಡ್ಸರ್ ಮ್ಯಾನರ್ ಹೋಟೆಲ್ ವಕ್ಫ್ ಆಸ್ತಿಯಾಗಿದ್ದು, ಅದನ್ನು ತೆರವು ಗೊಳಿಸಲು ಇವರೆಗೂ ಕ್ರಮಕೈಗೊಳ್ಳಲಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಅರಕಲಗೂಡು ಶಾಸಕರ ಪ್ರತ್ಯೇಕ ಪ್ರಶ್ನೆಗೆ ಉತ್ತರಿಸಿದ ಸಚಿವ ಜಮೀರ್ ಅಹಮದ್ ಖಾನ್, ಅರಕಲಗೂಡು ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ೧೪೩ ವಸತಿ ರಹಿತರು, ೧ ಸಾವಿರದ ೩೧೦ ನಿವೇಶನ ರಹಿತರು ಇದ್ದಾರೆ. ಇಲ್ಲಿಯವರೆಗೂ ೨೮೨ ಮನೆಗಳು ಮಂಜೂರಾಗಿದ್ದು ೧೯೫ ಮನೆಗಳು ಪೂರ್ಣಗೊಂಡಿದೆ ಎಂದು ಹೇಳಿದರು.

<><*<><>*><>

ಮಾರ್ಗಸೂಚಿ ದರಕ್ಕಿಂತ ಮೂರು ಪಟ್ಟು ಹೆಚ್ಚು ಹಣ ನೀಡಿ, ಸ್ಮಶಾನ ಭೂಮಿ ಖರೀದಿಗೆ ಸರ್ಕಾರ ಸಿದ್ಧ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಇಂದು ಔರಾದ್ ಶಾಸಕ

ಪ್ರಭು.ವಿ.ಚೌವ್ಹಾಣ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿರುವ ಸ್ಮಶಾನ ಭೂಮಿ ಖರೀದಿಗೆ ೫೮ ಕೋಟಿ ರೂಪಾಯಿ ಮೀಸಲಿರಿಸಲಾಗಿದೆ ಎಂದು ಹೇಳಿದ್ದಾರೆ. ಎಲ್ಲಾ ಉದ್ದೇಶಗಳಿಗೆ ಸರ್ಕಾರಿ ಭೂಮಿ ಮಂಜೂರು ಮಾಡುತ್ತಿರುವ ಹಿನ್ನಲೆಯಲ್ಲಿ ಸ್ಮಶಾನಕ್ಕೆ ಭೂಮಿ ಲಭ್ಯ ಇಲ್ಲದಂತಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಪ್ರತಿಪಕ್ಷ ನಾಯಕ ಆರ್.ಅಶೋಕ ಮಧ್ಯಪ್ರವೇಶಿಸಿ ಮಾತನಾಡಿ, ಸರ್ಕಾರ, ರಾಜ್ಯದಲ್ಲಿ ಸ್ಮಶಾನ ಭೂಮಿ ಖರೀದಿಗೆ ೫೮ ಕೋಟಿ ರೂಪಾಯಿ ಮೀಸಲಿರಿಸಿದೆ. ಆದರೆ ಜಮೀನಿನ ಬೆಲೆ ದುಬಾರಿಯಾಗಿರುವುದರಿಂದ ಈ ಹಣ ಸಾಕಾಗಲ್ಲ ಎಂದು ಸಲಹೆ ನೀಡಿದರು. ಸರ್ಕಾರ ರಾಜ್ಯದ ಎಲ್ಲಾ ಭಾಗದಲ್ಲೂ ಸ್ಮಶಾನ, ಶಾಲೆ, ಆಟದ ಮೈದಾನ ಸಹಿತ ಇತರ ಉದ್ದೇಶಗಳಿಗಾಗಿ ಸರ್ಕಾರಿ ಭೂಮಿಗಳನ್ನು ಕಾಯ್ದಿರಿಸುವ ಮೂಲಕ ಲ್ಯಾಂಡ್ ಬ್ಯಾಂಕ್ ಸ್ಥಾಪಿಸಬೇಕು ಎಂದು ತಿಳಿಸಿದರು. ಸಚಿವ ಕೃಷ್ಣಬೈರೇಗೌಡ ಉತ್ತರಿಸಿ, ಪ್ರತಿಪಕ್ಷದ ನಾಯಕರು ಉತ್ತಮ ಸಲಹೆ ನೀಡಿದ್ದು ಅದನ್ನು ಕಾರ್ಯರೂಪಕ್ಕೆ ತರಲು ಕ್ರಮಕೈಗೊಳ್ಳಲಾಗುವುದು ಎಂದು ಹೇಳಿದರು.

<><*<><>*><>

ರಾಜ್ಯದಲ್ಲಿ ೧೦೮-ಆರೋಗ್ಯ ಕವಚ ಸೇವೆಯಡಿಯಲ್ಲಿ, ೭೧೫ ಆಂಬ್ಯುಲೆನ್ಸ್‌ಗಳು ಕಾರ್ಯ ನಿರ್ವಹಿಸುತ್ತಿದ್ದು, ಎಲ್ಲಿಯೂ ಆಂಬ್ಯುಲೆನ್ಸ್‌ಗಳ ಕೊರತೆ ಉಂಟಾಗಿಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಮೇಲ್ಮನೆಗೆ ಮಾಹಿತಿ ನೀಡಿದ್ದಾರೆ. ಆಂಬ್ಯುಲೆನ್ಸ್‌ಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳು, ತಾಲ್ಲೂಕು ಆಸ್ಪತ್ರೆಗಳು, ಜಿಲ್ಲಾ ಆಸ್ಪತ್ರೆಗಳು ಹಾಗೂ ದುರ್ಗಮ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ನಿಲುಗಡೆ ಮಾಡಲಾಗಿದೆ. ಈ ಮೂಲಕ ರಾಜ್ಯದಲ್ಲಿ ತುರ್ತು ಆರೋಗ್ಯ ಸೇವೆಗಳನ್ನು ಒದಗಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><*<><>*><>

ಕೃತಕ ಬುದ್ಧಿಮತ್ತೆ ಸೇರಿದಂತೆ ಅತ್ಯಾಧುನಿಕ ತಂತ್ರಜ್ಞಾನ ಬಳಸಿಕೊಂಡು ರೈತ ಸಮೂಹ ಎಲ್ಲಾ ಹಂತದಲ್ಲೂ ಪ್ರಗತಿ ಕಾಣಬೇಕು ಎಂದು ಕೃಷಿ ಸಚಿವ ಎನ್.ಚೆಲುವರಾಯ ಸ್ವಾಮಿ ಕರೆ ನೀಡಿದ್ದಾರೆ. ಬೆಂಗಳೂರು ದೂರದರ್ಶನ, ಚಂದನವಾಹಿನಿಯಲ್ಲಿ ರೈತರ ರಿಯಾಲಿಟಿ ಶೋ, “ರೈತ ರತ್ನ” ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೃಷಿ ಕ್ಷೇತ್ರದಲ್ಲಿ ಇಂದು ಅಗಾಧ ಪರಿವರ್ತನೆಗಳಾಗುತ್ತಿವೆ. ಆದರೆ ರೈತರ ಬದುಕಿನಲ್ಲಿ ಪ್ರಗತಿಯಾಗುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಬೆಂಗಳೂರು ದೂರದರ್ಶನ ಕೇಂದ್ರ ಕೃಷಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ರೈತರ ಬದುಕಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಶ್ಲಾಘಿಸಿದ್ದಾರೆ. ರೈತರ ಬೆಳವಣಿಗೆಗೆ ಪೂರಕವಾಗಿರುವ, ರೈತರಲ್ಲಿ ಆತ್ಮ ವಿಶ್ವಾಸ ಮೂಡಿಸುವ ಇಂತಹ ಕಾರ್ಯಕ್ರಮಗಳು ಮತ್ತಷ್ಟು ಮೂಡಿ ಬರಲಿ ಎಂದು ಸಚಿವರು ಆಶಿಸಿದ್ದಾರೆ. ಹಿರಿಯ ಸಾಹಿತಿ, ನಾಡೋಜ ಡಾ. ಎಂ. ಬರಗೂರು

ರಾಮಚಂದ್ರಪ್ಪ ಮಾತನಾಡಿ, ರೈತರ ನಿಜ ಬದುಕನ್ನು ನೈಜವಾಗಿ ಚಿತ್ರಿಸಿ, ರೈತರಿಗಾಗಿ ನಡೆಸುತ್ತಿರುವ "ರೈತ ರತ್ನ" ನಿಜವಾದ ರಿಯಾಲಿಟಿ ಶೋ ಆಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರು ಕೃಷಿ ವಿವಿ ಕುಲಪತಿ ಡಾ.ಎಸ್.ವಿ.ಸುರೇಶ್, ಕೆಪೆಕ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಸಿ.ಎನ್. ಶಿವಪ್ರಕಾಶ್, ಬೆಂಗಳೂರು ದೂರದರ್ಶನ ಕೇಂದ್ರದ ಉಪ ಮಹಾನಿರ್ದೇಶಕರಾದ ಹನುಮಂತ್, ಕಾರ್ಯಕ್ರಮ ನಿರ್ಮಾಪಕರಾದ ಎಚ್.ಎನ್. ಗೋಪಿನಾಥ್ ಮತ್ತಿತರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

<><*<><>*><>

ಯಾವುದೇ ಒಂದು ದೇಶವು ಪ್ರಗತಿಯತ್ತ ಸಾಗಬೇಕೆಂದರೆ ಜಿಡಿಪಿ ಮುಖ್ಯ ಪಾತ್ರವಹಿಸುತ್ತದೆ ಎಂದು ಬೆಂಗಳೂರು ಪ್ರಾದೇಶಿಕ ಕಚೇರಿಯ ಸಹಾಯಕ ನಿರ್ದೇಶಕ ಎನ್.ಎಸ್. ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಆಯೋಜಿಸಲಾಗಿದ್ದ ರಾಷ್ಟ್ರೀಯ ಅಂಕಿಅಂಶ ಕಚೇರಿ, ಅಂಕಿಅಂಶ ಮತ್ತು ಕಾರ್ಯಕ್ರಮ ಸಚಿವಾಲಯ ಭಾರತೀಯರ ಕಾರ್ಪೊರೇಟ್ ಸೇವಾ ವಲಯದ ರಾಷ್ಟ್ರೀಯ ಸಮೀಕ್ಷೆಯ ಪ್ರಾದೇಶಿಕ ತರಬೇತಿ ಶಿಬಿರ ಉದ್ದೇಶಿಸಿ ಮಾತನಾಡಿದ ಅವರು, ಸೇವಾ ವಲಯವು ಇಂದು ಭಾರತದ ಆರ್ಥಿಕತೆಯ ಬೆನ್ನೆಲುಬಾಗಿದ್ದು, ಉದ್ಯೋಗ ಸೃಷ್ಟಿ ಮತ್ತು ಆರ್ಥಿಕ ಅಭಿವೃದ್ಧಿಗೆ ಗಮನಾರ್ಹವಾಗಿ ಕೊಡುಗೆ ನೀಡುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**ಧ್ವನಿ: ಎನ್.ಎಸ್. ಪಾಟೀಲ್ ( ೧೫ ಸೆಕೆಂಡ್ಸ್)**

<><*<><>*><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಮಾದರಿ ನೀತಿ ಸಂಹಿತೆ ಜಾರಿಯಾಗಿದ್ದು, ಇಂದಿನಿಂದಲೇ ನಾಮಪತ್ರ ಸಲ್ಲಿಕಾ ಕಾರ್ಯ ಆರಂಭಗೊಂಡಿದೆ ಎಂದು ಜಿಲ್ಲಾ ಚುನಾವಣಾವಣಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಹಿರಿಯ ನಾಯಕ ಡಾ.ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿದ್ದ ಈ ಕ್ಷೇತ್ರಕ್ಕೆ ಏಪ್ರಿಲ್ ೯ರಂದು ಮತದಾನ ನಡೆಯಲಿದೆ.

**ಧ್ವನಿ: ಡಾ.ಜಿ.ಎಂ.ಗಂಗಾಧರ ಸ್ವಾಮಿ ( ೩೩ ಸೆಕೆಂಡ್ಸ್)**

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**